71.58 ಪೆಟ್ರೋಲ್ ₹ 65.52 ಡೀಸೆಲ್
ಆಯಾ ಪ್ರದೇಶಕ್ಕೆ ಅನುಗುಣವಾಗಿ ಬೆಲೆಗಳಲ್ಲಿ ಏರು ಬದಲಾಗಲಿದೆ.

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ

# ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣ ಅಗತ್ಯ



ಕೊಪ್ಪಳ ತಾಲೂಕಿನ ಕಿಡದಾಳ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಹಮ್ಮಿಕೊಂಡ ಪಾಲಕರ ಸಭೆಯನ್ನು ಮಕ್ಕಳ ಜಾಗೃತಿ ಸಂಸ್ಥೆಯ ಪ್ರೇರಕ ಕೃಷ್ಣ ಲಮಾಣಿ ಉದ್ಘಾಟಿಸಿದರು.

ವಿಜಯವಾಣಿ ಸುದ್ದಿಜಾಲ ಕೊಪ್ಪಳ

ಮಕ್ಕಳ ಸರ್ವತೋಮುಖ ಬೆಳವಣಿಗೆ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಶಿಕ್ಷಣ ಅವಶ್ಯ ಎಂದು ಮಕ್ಕಳ ಜಾಗೃತಿ ಸಂಸ್ಥೆಯ ಪ್ರೇರಕ ಕೃಷ್ಣ ಲಮಾಣಿ ಹೇಳಿದರು.

ತಾಲೂಕಿನ ಕಿಡದಾಳ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಬೆಂಗಳೂರಿನ ಮಕ್ಕಳ ಜಾಗೃತಿ ಸಂಸ್ಥೆ ಕಲಿಕಾ ಕೇಂದ್ರದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪಾಲಕರ ಸಭೆ ಉದ್ಘಾಟಿಸಿ ಮಾತನಾಡಿದರು. ಮಕ್ಕಳ ಅಭಿವೃದ್ಧಿಗೆ ಪಾಲಕರ ಶ್ರಮ ಅಗತ್ಯ. ಮಕ್ಕಳ ಅನ್ವೇಷಣಾಯುತ ವಿಷಯಗಳನ್ನು ಶಾಲಾ ಶಿಕ್ಷಕರು ಹಾಗೂ ಪಾಲಕರು ಅರಿತುಕೊಳ್ಳಬೇಕು. ಇದರ ಜತೆಗೆ ಅವರ ಪ್ರತಿಭೆಗೆ ಪ್ರೋತ್ಸಾಹ ನೀಡಬೇಕು. ಅಂದಾಗ ಮಾತ್ರ ಅವರು ಅಭಿವೃದ್ಧಿ ಹೊಂದಲು ಸಾಧ್ಯ. ಶಿಕ್ಷಕರು ಪಠ್ಯದಲ್ಲಿನ ಅಭ್ಯಾಸಗಳನ್ನು ಬೋಧಿಸುವ ಜತೆಗೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚಿನ ಮಹತ್ವ ನೀಡಬೇಕು ಎಂದರು.

ಈ ವೇಳೆ ಮಕ್ಕಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲಾಯಿತು. ಶಾಲಾ ಮುಖ್ಯಶಿಕ್ಷಕ ಮಹಾದೇವಪ್ಪನವರ್, ಮಕ್ಕಳ ಜಾಗೃತಿ ಸಂಸ್ಥೆಯ ಸಂಯೋಜಕರು, ಎಸ್‌ಡಿಎಂಸಿ ಸದಸ್ಯರು ಸೇರಿ ಇತರರಿದ್ದರು.